# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1346(1607) |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಡಾ|| ಎಂ.ಜಿ. ಮುಳೆ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | : | 21/03/2025 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖೆಯಲ್ಲಿ ಹಾಕಿಕೊಂಡಿರುವ ಯೋಜನೆಗಳು ಯಾವುವು: | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಆಸರೆ ಇಲ್ಲದೆ ಸಂಕಷ್ಟದಲ್ಲಿರುವ ಹಿರಿಯ ನಾಗರಿಕರಿಗಾಗಿ ಸಹಾಯ ಮಾಡಲು ಇರುವ ಕಾರ್ಯಕ್ರಮಗಳೇನು: ಇದುವರೆಗೆ ಎಷ್ಟು ಜನರು ಇದರ ಸಹಾಯ ಪಡೆದಿದ್ದಾರೆ: ಯಾವ ರೀತಿಯಲ್ಲಿ ಸಹಾಯ ಪಡೆದಿದ್ದಾರೆ: | 60 ಮತ್ತು ಹೆಚ್ಚಿನ ವಯಸ್ಸಿನ ನಿರಾಶ್ರಿತ ವೃದ್ದರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯಗಳು ಮತ್ತು ಮನೋರಂಜನಾ ವಾತಾವರಣ ಕಲ್ಪಿಸಿ ವೃದ್ದರು ಸಮಾಜದಲ್ಲಿ ನೆಮ್ಮದಿಯಿಂದ ಬಾಳಲು ರಾಜ್ಯ ಸರ್ಕಾರದ ಅನುದಾನದಡಿಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಜಿಲ್ಲೆಗೆ ಒಂದರಂತೆ ಹಾಗೂ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಒಟ್ಟು 65 ವೃದ್ಧಾಶ್ರಮಗಳನ್ನು ನಡೆಸಲಾಗುತ್ತಿದೆ. ಪ್ರತಿ ವೃದ್ಧಾಶ್ರಮದಲ್ಲಿ 25 ಹಿರಿಯ ನಾಗರಿಕರಂತೆ ಅಂದಾಜು 1625 ಅಥವಾ ಹೆಚ್ಚಿನ ನಿರ್ಗತಿಕ ಹಿರಿಯ ನಾಗರಿಕರಿಗೆ ಆಶ್ರಯವನ್ನು ಕಲ್ಪಿಸಲಾಗುತ್ತಿದೆ. |
| ಇ) | ಸಂಧ್ಯಾ ಸುರಕ್ಷಾ ಯೋಜನೆಯಡಿ ಎಷ್ಟು ಜನ ವಯೋವೃದ್ದರಿಗೆ ಮಾಸಾಶನ ನೀಡಲಾಗಿದೆ? (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು) | ಸಂಧ್ಯಾಸುರಕ್ಷಾ ಯೋಜನೆಯಡಿ ಕಳೆದ ಎರಡು ವರ್ಷಗಳಿಂದ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಕೆಳಗಿನಂತಿದೆ. |

| ಕ್ರ ಸಂ | **ಯೋಜನೆಯ ಹೆಸರು** | **ವರ್ಷ** | |
|---|---|---|---|
| 1 | ಸಂಧ್ಯಾಸುರಕ್ಷಾ ಯೋಜನೆ | **2023-24** | **2024-25** |
| | | 2990571 | 3127398 |
| | **ಒಟ್ಟು** | **2990571** | **3127398** |

**ಸಂಖ್ಯೆ:ಮಮಇ 102 ಪಿಹೆಚ್‌ಪಿ 2025**

**(ಲಕ್ಷ್ಮೀ ಆರ್, ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು

## ಅನುಬಂಧ-1
## ಹಿರಿಯ ನಾಗರಿಕರಿಗಾಗಿ ರಾಜ್ಯ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು:

**ಹಿರಿಯ ನಾಗರಿಕರಿಗಾಗಿ ಹಗಲು ಯೋಗಕ್ಷೇಮ ಕೇಂದ್ರಗಳು:**
ರಾಜ್ಯದ 31 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.9.84 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ. ಪ್ರಸ್ತುತ 26 ಜಿಲ್ಲೆಗಳಲ್ಲಿ (ಬೆಂಗಳೂರು ನಗರ ಜಿಲ್ಲೆ 02 ಸೇರಿದಂತೆ) 27 ಹಗಲು ಯೋಗಕ್ಷೇಮ ಕೇಂದ್ರಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ.

**ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:**
ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ. ಬೆಳಗಾವಿ, ಕಲಬುರಗಿ, ಉತ್ತರ ಕನ್ನಡ ಮತ್ತು ಹಾವೇರಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದಂತೆ 27 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

**ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**
60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರು ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

**ವೃದ್ಧಾಶ್ರಮಗಳು:**
ರಾಜ್ಯದ 31 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.12.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ. ರಾಜ್ಯದ 31 ಜಿಲ್ಲೆಗಳಲ್ಲಿ ಜಿಲ್ಲೆಗೆ ಒಂದರಂತೆ ಹಾಗೂ ಪ್ರತಿ ಕಂದಾಯ ಉಪ ವಿಭಾಗದಲ್ಲಿ 01 ವೃದ್ಧಾಶ್ರಮವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಪ್ರಾರಂಭಿಸಲು ಅವಕಾಶವಿರುತ್ತದೆ. ಪ್ರಸ್ತುತ ಒಟ್ಟು 65 ವೃದ್ಧಾಶ್ರಮಗಳು ನಡೆಯುತ್ತಿವೆ.

**ಹಿರಿಯ ನಾಗರಿಕರಿಗಾಗಿ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಮಾಡಲು ಶಿಬಿರಗಳನ್ನು ಏರ್ಪಡಿಸುವ ಕುರಿತು:**
ಹಿರಿಯ ನಾಗರಿಕರಿಗಾಗಿ ಪ್ರತಿ ತಾಲ್ಲೂಕಿನಲ್ಲಿ 02 ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಶಿಬಿರಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.